# ಆರೋಗ್ಯವಂತ ಕರ್ನಾಟಕ

## 1.40 ಕೋಟಿ ಕುಟುಂಬಗಳಿಗೆ ಆರೋಗ್ಯ ಭಾಗ್ಯ
## ಯಶಸ್ವಿನಿ ಯೋಜನೆಯಡಿ 93 ಲಕ್ಷ ಜನರ ನೋಂದಣಿ



'ಸರ್ವರಿಗೂ ಕೈಗೆಟುಕುವ ಸ್ವಾಸ್ಥ್ಯ ಸೇವೆ' ಕರ್ನಾಟಕದ ಸರ್ಕಾರದ ಧ್ಯೇಯ. ಆರೋಗ್ಯ ಸೇವೆ ತುಟ್ಟಿಯಾಗುತ್ತಿರುವ ಈ ದಿನಗಳಲ್ಲಿ ಎಲ್ಲರಿಗೂ ಸುಲಭವಾಗಿ ಸಿಗಬಹುದಾದ ಆರೋಗ್ಯ ಸೇವೆಯ ಕಲ್ಪನೆಯೇ ವಿಭಿನ್ನ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ದೂರದರ್ಶಿತ್ವದ ಕಲ್ಪನೆ ಆರೋಗ್ಯ ಕ್ಷೇತ್ರದಲ್ಲಿ ಇಂದು ಸಾಕಾರಗೊಂಡಿದೆ.

'ಚಿಕಿತ್ಸೆ ಮೊದಲು, ಪಾವತಿ ನಂತರ' ಎನ್ನುವ ಧ್ಯೇಯದೊಂದಿಗೆ ನ.1ರಿಂದ ರಾಜ್ಯದ 1.40 ಕೋಟಿ ಕುಟುಂಬಗಳಿಗೆ ಆರೋಗ್ಯ ಭಾಗ್ಯ ಯೋಜನೆ ಜಾರಿಗೊಳಿಸಲಾಗಿದೆ.

★ 'ಆರೋಗ್ಯ ಕವಚ' ಯೋಜನೆಯಡಿ 1.7 ಕೋಟಿಗೂ ಅಧಿಕ ರೋಗಿಗಳಿಗೆ ಆಂಬ್ಯುಲೆನ್ಸ್ ಸೇವೆ ಹಾಗೂ ಡಯಾಲಿಸಿಸ್ ಕಾರ್ಯಕ್ರಮದಡಿ 31,561 ಮೂತ್ರಪಿಂಡ ವೈಫಲ್ಯದ ರೋಗಿಗಳಿಗೆ ಒಟ್ಟು 1.6 ಲಕ್ಷ ಬಾರಿ ಡಯಾಲಿಸಿಸ್ ಸೌಲಭ್ಯ ಕಲ್ಪಿಸಲಾಗಿದೆ.

★ ಶುಚಿ ಕಾರ್ಯಕ್ರಮದಡಿ 72.7 ಲಕ್ಷ ಹದಿಹರೆಯದ ಬಾಲಕಿಯರಿಗೆ ಋತುಚಕ್ರ ಸಂದರ್ಭದಲ್ಲಿ ಶುಚಿತ್ವ ಕಾಪಾಡಲು ವರ್ಷಕ್ಕೆ ತಲಾ 10 ಸ್ಯಾನಿಟರಿ ಪ್ಯಾಡ್‌ಗಳಿರುವ 13 ಪ್ಯಾಕೆಟ್‌ಗಳ ಉಚಿತ ವಿತರಣೆ.

★ ಸಾಮಾನ್ಯ ಜನತೆಗೆ ಗುಣಮಟ್ಟದ ಜೆನರಿಕ್ ಔಷಧಗಳನ್ನು ಒದಗಿಸುವ ನಿಟ್ಟಿನಲ್ಲಿ ಜನೌಷಧಿ ಔಷಧ ಮಳಿಗೆಗಳು ಯೋಜನೆ ಅಡಿ ಔಷಧಿ ಮಳಿಗೆಗಳ ಸ್ಥಾಪನೆ.

★ ಯಶಸ್ವಿನಿ ಯೋಜನೆಯಡಿ ಕಳೆದ 4 ವರ್ಷಗಳಲ್ಲಿ 93 ಲಕ್ಷ ಜನರ ನೋಂದಣಿ. ವಿವಿಧ ಆರೋಗ್ಯ ಯೋಜನೆಗಳಡಿ ಪ್ರಯೋಜನ ಪಡೆದ 4 ಕೋಟಿಗೂ ಅಧಿಕ ಫಲಾನುಭವಿಗಳು.

### ಇಂಧನ ಕ್ಷೇತ್ರದಲ್ಲಿ ಸ್ವಾವಲಂಬನೆ

ಇಂಧನ ಕ್ಷೇತ್ರದಲ್ಲಿ ಸ್ವಾವಲಂಬನೆಯನ್ನು ಸಾಧಿಸುವತ್ತ ಕರ್ನಾಟಕದ ದಾಪುಗಾಲು ಇಡುತ್ತಿದೆ.



★ ವಿಶ್ವದಲ್ಲಿಯೇ ದೊಡ್ಡದೆನಿಸಿರುವ 2000 ಮೆಗಾ ವ್ಯಾಟ್‌ಗಳ ಸೌರ ವಿದ್ಯುತ್ ಪಾರ್ಕ್ ಪಾವಗಡದಲ್ಲಿ ನಿರ್ಮಾಣವಾಗಿದೆ.

★ ವಿದ್ಯುತ್ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಲು ಎಲ್ಲಾ ಮೂಲಗಳಿಂದ ಉತ್ಪತ್ತಿಯಾಗುವ ವಿದ್ಯುತ್ ಸಾಮರ್ಥ್ಯ 5848 ಮೆಗಾವ್ಯಾಟ್ ಹೆಚ್ಚಳವಾಗಿದೆ. ಪ್ರಸಕ್ತ ಸಾಲಿನಲ್ಲಿ 3,975 ಮೆಗಾವ್ಯಾಟ್ ಸಾಮರ್ಥ್ಯ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗಿದೆ.

★ ರೈತರ 10ಎಚ್‌ಪಿ ಮತ್ತು ಅದರೊಳಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಲು ಹಾಗೂ ಭಾಗ್ಯಜ್ಯೋತಿ ಮತ್ತು ಕುಟೀರ ಜ್ಯೋತಿ ಸ್ಥಾವರಗಳಿಗೆ ಉಚಿತ ವಿದ್ಯುತ್ ಒದಗಿಸಲು ಕಳೆದ ನಾಲ್ಕು ವರ್ಷದ ಅವಧಿಯಲ್ಲಿ ರೂ.28,450 ಕೋಟಿ ಸಹಾಯಧನ ನೀಡಲಾಗಿದೆ.

★ ಗಂಗಾಕಲ್ಯಾಣ ಯೋಜನೆಯಡಿ 58,145 ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ. 37,251 ಕುಡಿಯುವ ನೀರಿನ ಸ್ಥಾವರಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.

★ ರಾಜ್ಯದ ಪ್ರತೀ ಲೋಕಸಭೆ ಹಾಗೂ ವಿಧಾನಸಭೆ ಕ್ಷೇತ್ರದ ತಲಾ ಐದು ಗ್ರಾಮಗಳನ್ನು ಗರಿಷ್ಠ ರೂ. 40 ಲಕ್ಷ ವೆಚ್ಚದಲ್ಲಿ 24 ಗಂಟೆ ನಿರಂತರ ವಿದ್ಯುತ್ ಪೂರೈಕೆ ಸಹಿತ ವಿದ್ಯುತ್ ಅಡಚಣೆ ರಹಿತ ಗ್ರಾಮಗಳಾಗಿ ಮಾರ್ಪಾಡು ಮಾಡಲಾಗಿದೆ.

ಕರ್ನಾಟಕದ ಪ್ರಜ್ವಲಿಸುತ್ತಿದೆ. ಕೈಗಾರಿಕಾ ಕ್ರಾಂತಿಯ ಹಾದಿಯಲ್ಲಿ ಅಡಚಣೆರಹಿತ ವಿದ್ಯುತ್ ಪೂರೈಕೆ ಮಹತ್ವದ ಪಾತ್ರ ವಹಿಸುತ್ತಿದೆ.

### ಕಂದಾಯ ಕ್ಷೇತ್ರದಲ್ಲಿ ಕ್ರಾಂತಿ



ಕಂದಾಯ ಕ್ಷೇತ್ರದಲ್ಲಿ ರಾಜ್ಯ ಸರ್ಕಾರ ಜನಪರವಾದ ಹಲವು ಐತಿಹಾಸಿಕ ಕ್ರಮಗಳನ್ನು ಕೈಗೊಂಡಿದೆ.

ರಾಜ್ಯದ ಒಟ್ಟು 58 ಸಾವಿರ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಐತಿಹಾಸಿಕ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕಕ್ಕೆ ಅನುಮೋದನೆ ನೀಡಲಾಗಿದೆ.

ರಾಜ್ಯದಲ್ಲಿ ಒಟ್ಟು 2.02ಲಕ್ಷ ಎಕರೆ ಸರ್ಕಾರಿ ಜಮೀನು ಒತ್ತುವರಿಯನ್ನು ತೆರವುಗೊಳಿಸಲಾಗಿದೆ. ಬೆಂಗಳೂರು ನಗರ ಜಿಲ್ಲೆ ಒಂದರಲ್ಲಿಯೇ 1 ಲಕ್ಷ ಕೋಟಿ ರೂ. ಮೌಲ್ಯದ 5,325ಎಕರೆ ಸರ್ಕಾರಿ ಜಮೀನು ಒತ್ತುವರಿಯನ್ನು ತೆರವು ಮಾಡಲಾಗಿದೆ.

ಪರಿಹಾರ ತಂತ್ರಾಂಶದ ಮೂಲಕ ಇನ್‌ಪುಟ್ ಸಬ್ಸಿಡಿ ಹಾಗೂ ಇತರೆ ಪರಿಹಾರಗಳು ರೈತರ ಖಾತೆಗೆ ನೇರ ಜಮೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ದೇಶದಲ್ಲಿಯೇ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಸಾಮಾಜಿಕ ಭದ್ರತೆ ಒದಗಿಸಿರುವ ರಾಜ್ಯವೆನ್ನುವ ಶ್ರೇಯ ಕರ್ನಾಟಕದ್ದು. ಕಂದಾಯ ಇಲಾಖೆಯ ವಿವಿಧ ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳಡಿ 75 ಲಕ್ಷ ದುರ್ಬಲರಿಗೆ ಆರ್ಥಿಕ ಭದ್ರತೆ ಒದಗಿಸಿರುವುದು ಈ ನಿಟ್ಟಿನಲ್ಲಿ ಅತ್ಯಂತ ಕ್ರಾಂತಿಕಾರಕ ಕ್ರಮ ಎನ್ನಿಸಿಕೊಂಡಿದೆ. ■